ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು
ನೂರ ನಲವತ್ತಮೂರನೆಯ ಅಧಿವೇಶನ
ಗುರುವಾರ, ದಿನಾಂಕ: 4ನೇ ಫೆಬ್ರುವರಿ, 2021

ಕೆ.ಪಿ.ಎಸ್.ಸಿ ಮೂಲಕ ಆಯ್ಕೆಯಾದ ಎಫ್.ಡಿ.ಎ ಮತ್ತು ಎಸ್.ಡಿ.ಎ ಅಭ್ಯರ್ಥಿಗಳ ನೇಮಕಾತಿ ಬಗ್ಗೆ

ಶ್ರೀ ಕೆ.ಟಿ.ಶ್ರೀಕಂಠೇಗೌಡ (ಪದವೀಧರರ ಕ್ಷೇತ್ರ) :-

384(425) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) 2017 ರಲ್ಲಿ ಅಧಿಸೂಚನೆ ಹೊರಡಿಸಿ ಕೆ.ಪಿ.ಎಸ್.ಸಿ ಮೂಲಕ ಆಯ್ಕೆಯಾದ ಎಫ್.ಡಿ.ಎ ಮತ್ತು ಎಸ್.ಡಿ.ಎ ಅಭ್ಯರ್ಥಿಗಳೆಷ್ಟು; (ವಿವರ ನೀಡುವುದು)

(ಆ) ಯಾವಾಗ ಅಂತಿಮ ಆಯ್ಕೆ ಪಟ್ಟಿಯನ್ನು ಪ್ರಕಟಿಸಲಾಗುತ್ತದೆ;

(ಇ) ಸದರಿ ನೇಮಕಾತಿ ಪ್ರಕ್ರಿಯೆಯನ್ನು ತಡೆಹಿಡಿಯಲಾಗಿದೆಯೇ;

(ಈ) ತಡೆಹಿಡಿದಿದ್ದಲ್ಲಿ, ಯಾವಾಗ ತೆರವುಗೊಳಿಸಲಾಗುವುದು ?